**ಕರ್ನಾಟಕ ವಿಧಾನ ಪರಿಷತ್ತು**

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1051 (712) |
| ಸದಸ್ಯರ ಹೆಸರು | : | ಶ್ರೀ ಕೆ.ಪ್ರತಾಪ್‌ಚಂದ್ರ ಶೆಟ್ಟಿ, (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 10-03-2021. |
| ಉತ್ತರಿಸುವ ಸಚಿವರು | : | ಮಾನ್ಯ ಉಪಮುಖ್ಯಮಂತ್ರಿಗಳು,<br>ಲೋಕೋಪಯೋಗಿ ಇಲಾಖೆ |

| ಕ್ರಸಂ. | ಪ್ರಶ್ನೆಗಳು | | ಉತ್ತರಗಳು |
|---|---|---|---|
| ಅ) | ಉಡುಪಿ ಜಿಲ್ಲೆಯ ಕುಂದಾಪುರ ತಾಲೂಕಿನ ಹಾರ್ದಳ್ಳಿಮಂಡಳ್ಳಿ ಗ್ರಾಮದಲ್ಲಿ ವಾರಾಹಿ ನದಿಗೆ ಅಡ್ಡಲಾಗಿ ನಿರ್ಮಿಸಲು ಉದ್ದೇಶಿಸಿದ ಸೌಡ ಶಂಕರನಾರಾಯಣ ಸಂಪರ್ಕ ಸೇತುವೆ ಯಾವಾಗ ಮಂಜೂರಾತಿ ಯಾಗಿರುತ್ತದೆ; ಅದರ ಅಂದಾಜು ಮೊತ್ತವೆಷ್ಟು; | : | ಕುಂದಾಪುರ ತಾಲ್ಲೂಕು ಸೌಡ ಶಂಕರನಾರಾಯಣದಲ್ಲಿ ವಾರಾಹಿ ನದಿಗೆ ಅಡ್ಡಲಾಗಿ 3 ಸೇತುವೆಗಳ ನಿರ್ಮಾಣ ಕಾಮಗಾರಿಯು 2016-17 ನೇ ಸಾಲಿನಲ್ಲಿ ಕೇಂದ್ರ ರಸ್ತೆ ನಿಧಿಯಡಿಯಲ್ಲಿ ರೂ.1800.00 ಲಕ್ಷಗಳಿಗೆ ಮಂಜೂರಾಗಿರುತ್ತದೆ. ಈ ಪೈಕಿ ಸೌಡ ಶಂಕರನಾರಾಯಣ ಸೇತುವೆ ನಿರ್ಮಾಣ ಕಾಮಗಾರಿಗೆ ರೂ.850.00 ಲಕ್ಷಗಳ ಮೊತ್ತದಲ್ಲಿ ನಿರ್ಮಾಣ ಕಾಮಗಾರಿಯನ್ನು ಕೈಗೊಳ್ಳಬೇಕಾಗಿರುತ್ತದೆ. (Job No. KNT- 2016-17-1649) |
| ಆ) | ಈ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಯಾವ ಹಂತದಲ್ಲಿರುತ್ತದೆ; (ಅಂದಾಜು ಪಟ್ಟಿ ಪ್ರತಿ ಒದಗಿಸುವುದು) | : | ಈ ಹಿಂದೆ ಕಾಮಗಾರಿಯ ಸಂಬಂಧ ಟೆಂಡರ್ ಕರೆಯಲಾಗಿದ್ದು, ಟೆಂಡರ್‌ನಲ್ಲಿ ಭಾಗವಹಿಸಿದ್ದ ಗುತ್ತಿಗೆದಾರರು ಈ ಕಾಮಗಾರಿಯನ್ನು ನಿರ್ವಹಿಸಲು ಸಾಧ್ಯವಿಲ್ಲವೆಂದು ಪತ್ರ ನೀಡಿದ ಹಿನ್ನೆಲೆಯಲ್ಲಿ ಸರ್ಕಾರದ ಪತ್ರ ಸಂಖ್ಯೆ:ಲೋಇ 17 ಸಿಆರ್‌ಎಫ್ 2019, ದಿನಾಂಕ: 18.11.019 ರಲ್ಲಿ ಕಾಮಗಾರಿಯ ಟೆಂಡರನ್ನು ರದ್ದುಪಡಿಸಲಾಗಿದೆ. ಪ್ರಸ್ತುತ ಕಾಮಗಾರಿಯ ಮರು ಟೆಂಡರ್ ಕರೆಯುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ. |
| ಇ) | ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಅನುಷ್ಠಾನಗೊಳಿಸಲಾಗುವುದು? | : | ಕಾಮಗಾರಿಗೆ ಮರು ಟೆಂಡರ್ ಕರೆಯಲು ಅನುಮತಿ ನೀಡಿದ ಬಳಿಕ ನಿಯಮಾನುಸಾರ ಟೆಂಡರ್ ಪ್ರಕ್ರಿಯೆ ಪ್ರಾರಂಭಿಸಿ ನಿಗದಿತ ಅವಧಿಯೊಳಗೆ ಕಾಮಗಾರಿಯನ್ನು ಅನುಷ್ಠಾನಗೊಳಿಸಲಾಗುವುದು. |

ಕಡತ ಸಂಖ್ಯೆ: ಲೋಇ 31 ಸಿಬಿಆರ್ 2021 (ಇ)

(ಗೋವಿಂದ.ಎಂ.ಕಾರಜೋಳ)
ಉಪ ಮುಖ್ಯಮಂತ್ರಿಗಳು
ಲೋಕೋಪಯೋಗಿ ಇಲಾಖೆ